# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 362 (288) |
| ಸದಸ್ಯರ ಹೆಸರು: | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ಸಚಿವರು | ಮಾನ್ಯ ಕಂದಾಯ ಸಚಿವರು |
| ಉತ್ತರಿಸಬೇಕಾದ ದಿನಾಂಕ: | 14.09.2022 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಒಟ್ಟು ತಾಲ್ಲೂಕುಗಳು ಎಷ್ಟು ಹಾಗೂ ತಾಲ್ಲೂಕುವಾರು ತಹಶೀಲ್ದಾರ್‌ರ ಸಂಖ್ಯೆ ಎಷ್ಟು; | ಪ್ರಸ್ತುತ ರಾಜ್ಯದಲ್ಲಿ 239 ತಾಲ್ಲೂಕುಗಳು ಇರುತ್ತವೆ. ತಹಶೀಲ್ದಾರ್ ಗ್ರೇಡ್-1 ವೃಂದದಲ್ಲಿ ಮಂಜೂರಾದ ಹುದ್ದೆಗಳು 259 ಹಾಗೂ ತಹಶೀಲ್ದಾರ್ ಗ್ರೇಡ್-2 ವೃಂದದಲ್ಲಿ ಮಂಜೂರಾದ ಹುದ್ದೆಗಳು 550 ಇರುತ್ತವೆ. |
| ಆ) | ಪ್ರಸ್ತುತ ರಾಜ್ಯದಲ್ಲಿರುವ ಗ್ರೇಡ್-1 ಮತ್ತು ಗ್ರೇಡ್-2 ತಹಶೀಲ್ದಾರರ ಸಂಖ್ಯೆ ಎಷ್ಟು; | |
| ಇ) | ಮುಂಬಡ್ತಿಯಿಂದ ತಹಶೀಲ್ದಾರ್ ಹುದ್ದೆಗೆ ನೇಮಕವಾದವರು ಹಾಗೂ ಕೆಪಿಎಸ್‌ಸಿ ಮೂಲಕ (ಕೆ.ಎ.ಎಸ್) ನೇಮಕವಾಗಿ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳೆಷ್ಟು; (ಮಾಹಿತಿ ನೀಡುವುದು) | ಮುಂಬಡ್ತಿಯಿಂದ ತಹಶೀಲ್ದಾರ್ ಹುದ್ದೆಗೆ ನೇಮಕಗೊಂಡವರು<br>i) ತಹಶೀಲ್ದಾರ್ ಗ್ರೇಡ್-1 ವೃಂದಕ್ಕೆ ಮುಂಬಡ್ತಿ ಹೊಂದಿದ ಅಧಿಕಾರಿಗಳು - 166<br>ii) ತಹಶೀಲ್ದಾರ್ ಗ್ರೇಡ್-2 ವೃಂದಕ್ಕೆ ಮುಂಬಡ್ತಿ ಹೊಂದಿದ ಅಧಿಕಾರಿಗಳು - 178<br>iii) ತಹಶೀಲ್ದಾರ್ ಗ್ರೇಡ್-2 ವೃಂದಕ್ಕೆ ನೇರ ನೇಮಕಾತಿ ಹೊಂದಿದ ಅಧಿಕಾರಿಗಳು - 97 |
| ಈ) | ತಹಶೀಲ್ದಾರರ ಕೊರತೆಯನ್ನು ಎದುರಿಸುತ್ತಿರುವ ತಾಲ್ಲೂಕುಗಳು ಎಷ್ಟು; | ತಾಲ್ಲೂಕುಗಳಿಗೆ ಮಂಜೂರಾದ ತಹಶೀಲ್ದಾರ್ ಗ್ರೇಡ್-1 ಮತ್ತು ತಹಶೀಲ್ದಾರ್ ಗ್ರೇಡ್-2 ಹುದ್ದೆಗಳಲ್ಲಿ ಯಾವುದಾದರೂ ಒಂದು ಹುದ್ದೆಯಲ್ಲಿ ತಹಶೀಲ್ದಾರರು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. ಆದ್ದರಿಂದ ಯಾವುದೇ ತಾಲ್ಲೂಕಿನಲ್ಲಿ ತಹಶೀಲ್ದಾರರ ಕೊರತೆ ಇರುವುದಿಲ್ಲ. |
| ಉ) | ಪ್ರಸ್ತುತ ರಾಜ್ಯದಲ್ಲಿ ಖಾಲಿಯಿರುವ ಹಾಗೂ ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ನೇಮಕ ಮಾಡಿಕೊಳ್ಳಬಹುದಾದ ತಹಶೀಲ್ದಾರ್ ಗ್ರೇಡ್-1 ಮತ್ತು ಗ್ರೇಡ್-2 ಹುದ್ದೆಗಳೆಷ್ಟು? (ಸಂಪೂರ್ಣ ಮಾಹಿತಿಯನ್ನು ನೀಡುವುದು) | ವೃಂದ ಮತ್ತು ನೇಮಕಾತಿ ನಿಯಮಗಳ ಅನ್ವಯ ತಹಶೀಲ್ದಾರ್ ಗ್ರೇಡ್-1 ಹುದ್ದೆಗಳನ್ನು ಶೇ.100ರಷ್ಟು ಮುಂಬಡ್ತಿ ಮೂಲಕ ತುಂಬಬೇಕಾಗಿರುತ್ತದೆ.<br><br>ವೃಂದ ಮತ್ತು ನೇಮಕಾತಿ ನಿಯಮಗಳ ಅನ್ವಯ ತಹಶೀಲ್ದಾರ್ ಗ್ರೇಡ್-2 ವೃಂದದ ಹುದ್ದೆಗಳಲ್ಲಿ ಶೇ.50 ರಷ್ಟು ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ತುಂಬಬೇಕಾಗಿದ್ದು, ಪ್ರಸ್ತುತ 97 ಅಧಿಕಾರಿಗಳು ನೇರ ನೇಮಕಾತಿ ಹುದ್ದೆಗಳ ಎದುರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. 2011ನೇ ಸಾಲಿನ 26 ಅಧಿಕಾರಿಗಳಿಗೆ ನೇಮಕಾತಿ ಆದೇಶ ನೀಡಲು ಪರಿಶೀಲಿಸಲಾಗುತ್ತಿದೆ. |

| | | |
|---|---|---|
| | | ಮುಂದುವರೆದು, ಕರ್ನಾಟಕ ಲೋಕ ಸೇವಾ ಆಯೋಗವು ದಿನಾಂಕ:05.09.2022ರಂದು ಗೆಜೆಟೆಡ್ ಪ್ರೊಬೆಷನರ್ಸ್ 2017ನೇ ಸಾಲಿನ ನೇಮಕಾತಿಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದ್ದು, ಸದರಿ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ 50 ತಹಶೀಲ್ದಾರ್ ಗ್ರೇಡ್-2 ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗಿದ್ದು, ಕರ್ನಾಟಕ ಲೋಕಸೇವಾ ಆಯೋಗದಿಂದ ಅಂತಿಮ ಆಯ್ಕೆ ಪಟ್ಟಿ ಇನ್ನೂ ಪ್ರಕಟವಾಗಿರುವುದಿಲ್ಲ. |

ಸಂಖ್ಯೆ: ಕಂಇ 389 ಎಎಸ್‌ಡಿ 2022

**(ಆರ್. ಅಶೋಕ)**
ಕಂದಾಯ ಸಚಿವರು